Akashvani : Bangalore
National Bulletin In Kannada
10.08.2024 09.05AM
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

10.08.2024 09.05AM
*******

ಮುಖ್ಯಾಂಶಗಳು:

- ಒಂದು ದಿನದ ಪ್ರವಾಸಕ್ಕೆ ಟಿಮೋರ್‌ಲೆಸ್ತೆ ರಾಜಧಾನಿ ದಿಲಿಗೆ ತಲುಪಿದ ರಾಷ್ಟ್ರಪತಿ ದ್ರೌಪದಿ ಮುರ್ಮು
- ಭೂಕುಸಿತ ದುರಂತಕ್ಕೀಡಾದ ವಯನಾಡು ಜಿಲ್ಲೆಗೆ ಇಂದು ಪ್ರಧಾನಿ ನರೇಂದ್ರ ಮೋದಿ ಭೇಟಿ; ಪರಿಶೀಲನಾ ಸಭೆಯಲ್ಲಿ ಭಾಗಿ
- ಸಚಿವ ಸಂಪುಟ ಸಭೆಯಲ್ಲಿ ನಿನ್ನೆ ಪ್ರಧಾನಮಂತ್ರಿ ಆವಾಸ್ ಯೋಜನೆ-ನಗರ ೨.೦ ಸೇರಿದಂತೆ ಹಲವು ಯೋಜನೆಗಳಿಗೆ ಅನುಮೋದನೆ
- ಪ್ಯಾರಿಸ್ ಒಲಿಂಪಿಕ್ಸ್; ಕುಸ್ತಿಯ ೫೭ ಕೆ.ಜಿ. ಫ್ರೀಸ್ಟೈಲ್ ವಿಭಾಗದಲ್ಲಿ ಅಮನ್ ಸೆಹ್ರಾವತ್‌ಗೆ ಐತಿಹಾಸಿಕ ಕಂಚು ಪದಕ

******

ಟಿಮೋರ್‌ಲೆಸ್ತೆಗೆ ಒಂದು ದಿನದ ಪ್ರವಾಸ ಕೈಗೊಂಡಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ರಾಜಧಾನಿ ದಿಲಿಗೆ ತಲುಪಿದ್ದಾರೆ. ಟಿಮೋರ್‌ಲೆಸ್ತೆ ಅಧ್ಯಕ್ಷ ಜೋಸ್ ರಾಮೋಸ್ ಹೊರ್ಟಾ ಅವರು ದಿಲಿಯಲ್ಲಿರುವ ಪ್ರೆಸಿಡೆಂಟ್ ನಿಕೊಲೌ ಲೋಬಾಟೊ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಅವರನ್ನು ಬರಮಾಡಿಕೊಂಡರು. ರಾಷ್ಟ್ರಪತಿ ಅವರು ಟಿಮೋರ್ ಲೆಸ್ತೆಯ ಉನ್ನತ ನಾಯಕರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದು, ಅಲ್ಲಿನ ಭಾರತೀಯ ಸಮುದಾಯದೊಂದಿಗೆ ಸಂವಾದ ನಡೆಸಲಿದ್ದಾರೆ.

******

ಪ್ರಧಾನಿ ನರೇಂದ್ರ ಮೋದಿ ಭೂಕುಸಿತ ದುರಂತಕ್ಕೀಡಾದ ಕೇರಳದ ವಯನಾಡು ಜಿಲ್ಲೆಗೆ ಇಂದು ಭೇಟಿ ನೀಡಲಿದ್ದಾರೆ. ಅವರು ಭೂಕುಸಿತ ಪ್ರದೇಶದ ವೈಮಾನಿಕ ಸಮೀಕ್ಷೆ ನಡೆಸಲಿದ್ದಾರೆ. ಇದೇ ವೇಳೆ ಅವರು ಸೇನೆಯಿಂದ ನಿರ್ಮಿಸಲ್ಪಟ್ಟ ತಾತ್ಕಾಲಿಕ ಬೇಲಿ ಸೇತುವೆಗೂ ಭೇಟಿ ನೀಡಲಿದ್ದಾರೆ. ನಂತರ ಅವರು, ಭೂಕುಸಿತದ ಸಂತ್ರಸ್ತರು ಹಾಗೂ ಭೂಕುಸಿತದಿಂದ ಬದುಕುಳಿದವರೊಂದಿಗೆ ಸಂವಾದ ನಡೆಸಲಿದ್ದಾರೆ. ನಂತರ ಅವರು ಭೂಕುಸಿತ ಹಾಗೂ ಅದಕ್ಕೆ ಸಂಬಂಧಿಸಿದ ಶೋಧ ಮತ್ತು ಪರಿಹಾರ ಕಾರ್ಯಾಚರಣೆ ಕುರಿತು ಪರಿಶೀಲನಾ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಪ್ರಸ್ತುತ ಪರಿಹಾರ ಕೇಂದ್ರಗಳಲ್ಲಿರುವ ಸಂತ್ರಸ್ತರ ಸ್ಥಳಾಂತರಕ್ಕೆ ಸಂಬಂಧಪಟ್ಟಂತೆ ಪ್ರಧಾನಿ ಅವರ ಈ ಭೇಟಿ ನಿರ್ಣಾಯಕವಾಗಿದೆ. ರಾಜ್ಯದ ಆಡಳಿತಾರೂಢ ಸಿಪಿಐಎಂ ಮತ್ತು ಪ್ರತಿಪಕ್ಷ ಯುಡಿಎಫ್ ಇಬ್ಬರು ಈ ದುರಂತವನ್ನು ರಾಷ್ಟ್ರೀಯ ವಿಪತ್ತು ಎಂದು ಘೋಷಿಸಲು ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಿದರು. ಇದರ ನಡುವೆ ನಿನ್ನೆ ಕೇಂದ್ರ ಗೃಹ ಸಚಿವಾಲಯದ ಜಂಟಿ ಕಾರ್ಯದರ್ಶಿ ರಾಜೀವ್ ಕುಮಾರ್ ಅವರ ನೇತೃತ್ವದ ವಿವಿಧ ಸಚಿವಾಲಯಗಳ ಎಂಟು ಸದಸ್ಯರ ತಂಡ ನಿನ್ನೆ ಭೂಕುಸಿತ ಪ್ರದೇಶಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿತು.

******

ಪ್ರಧಾನಮಂತ್ರಿ ಆವಾಸ್ ಯೋಜನೆ-ನಗರ ೨.೦ ಯೋಜನೆಗೆ ನಿನ್ನೆ ನಡೆದ ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ದೊರೆತಿದೆ. ೨೦೨೪-೨೫ರಿಂದ ೨೦೨೮-೨೯ರ ಹಣಕಾಸು ವರ್ಷದಲ್ಲಿ ಪ್ರಧಾನಮಂತ್ರಿ ಆವಾಸ್ ಯೋಜನೆ-ಗ್ರಾಮಿನ್ ಅನುಷ್ಠಾನಕ್ಕೆ ಸಚಿವ ಸಂಪುಟ ಸಭೆ ಒಪ್ಪಿಗೆಯನ್ನು ನೀಡಿತು. ನಿನ್ನೆ ಸುದ್ದಿಗಾರರಿಗೆ ಮಾಹಿತಿ ನೀಡಿದ, ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್, ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ಮೂರು ಕೋಟಿ ಹೊಸ ಮನೆಗಳನ್ನು ನಿರ್ಮಿಸಲಾಗುವುದು, ಅವುಗಳಲ್ಲಿ ಎರಡು ಕೋಟಿ ಮನೆಗಳನ್ನು ಗ್ರಾಮೀಣ ಪ್ರದೇಶದಲ್ಲಿ ಮತ್ತು ಒಂದು ಕೋಟಿ ನಗರ ಪ್ರದೇಶಗಳಲ್ಲಿ ನಿರ್ಮಿಸಲಾಗುವುದು. ಈ ಯೋಜನೆಗೆ ಬಜೆಟ್‌ನಲ್ಲಿ ೩ ಲಕ್ಷ ೬೦ ಸಾವಿರ ಕೋಟಿ ರೂಪಾಯಿ ಮೀಸಲಿಡಲಾಗಿದೆ ಎಂದರು. ಈ ಯೋಜನೆಯಡಿ ನಗರದಲ್ಲಿ ವಾಸವಿರುವ ಬಡ ಮತ್ತು ಮಧ್ಯಮ ವರ್ಗದ ೧ ಕೋಟಿ ಕುಟುಂಬಗಳಿಗೆ ರಾಜ್ಯಗಳು, ಕೇಂದ್ರಾಡಳಿತ ಪ್ರದೇಶಗಳು ಮತ್ತು ಪ್ರಾಥಮಿಕ ಸಾಲ ನೀಡುವ ಸಂಸ್ಥೆಗಳ ಮೂಲಕ ಸಹಾಯವನ್ನು ಒದಗಿಸಲಾಗುತ್ತದೆ.

೫ ವರ್ಷಗಳಲ್ಲಿ ನಗರ ಪ್ರದೇಶಗಳಲ್ಲಿ ಕೈಗೆಟುಕುವ ವೆಚ್ಚದಲ್ಲಿ ಮನೆಯನ್ನು ನಿರ್ಮಿಸಲು, ಖರೀದಿಸಲು ಅಥವಾ ಬಾಡಿಗೆಗಾಗಿ ಆರ್ಥಿಕ ನೆರವು ನೀಡಲಾಗುತ್ತದೆ. ಯೋಜನೆಯಡಿ ೨ ಕೋಟಿ ೩೦ ಲಕ್ಷ ರೂಪಾಯಿ ಸರ್ಕಾರದ ನೆರವು ನೀಡಲಾಗುವುದು. ಆರ್ಥಿಕವಾಗಿ ದುರ್ಬಲ ವರ್ಗ, ಕಡಿಮೆ ಮತ್ತು ಮಧ್ಯಮ ಆದಾಯ ಗುಂಪುಗಳು ಪಡೆಯುವ ಗೃಹ ಸಾಲಕ್ಕೆ ೨೫ ಲಕ್ಷ ರೂಪಾಯಿಗಳವರೆಗೆ ನಾಲ್ಕು ಪ್ರತಿಶತದ ಬಡ್ಡಿ ಸಬ್ಸಿಡಿಯನ್ನು ನೀಡಲಾಗುತ್ತದೆ ಎಂದು ಸಚಿವರು ಹೇಳಿದರು. ಸಂಪುಟ ಸಭೆಯಲ್ಲಿ ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯ ಪ್ರಸ್ತಾಪಿಸಿದ ಸ್ವಚ್ಛ ಸಸ್ಯ ಕಾರ್ಯಕ್ರಮವನ್ನು ಸಹ ಸರ್ಕಾರ ಅನುಮೋದಿಸಿದೆ. ಈ ಕುರಿತು ತಿಳಿಸಿದ ಸಚಿವ ವೈಷ್ಣವ್, ಒಂದು ಸಾವಿರದ ೭೬೫ ಕೋಟಿ ರೂಪಾಯಿಗಳ ಗಣನೀಯ ಹೂಡಿಕೆಯೊಂದಿಗೆ, ಈ ಉಪಕ್ರಮವು ಭಾರತದಲ್ಲಿ ತೋಟಗಾರಿಕೆ ಕ್ಷೇತ್ರದಲ್ಲಿ ಕ್ರಾಂತಿಯನ್ನುಂಟುಮಾಡಲು ಸಿದ್ಧವಾಗಿದೆ ಮತ್ತು ಶ್ರೇಷ್ಠತೆ ಹಾಗೂ ಸುಸ್ಥಿರತೆಗೆ ಹೊಸ ಮಾನದಂಡಗಳನ್ನು ಹೊಂದಿಸುವ ನಿರೀಕ್ಷೆಯಿದೆ ಎಂದರು. ಸಂಪುಟ ಸಭೆಯಲ್ಲಿ ರೈಲ್ವೆ ಸಚಿವಾಲಯದ ೨೪ ಸಾವಿರದ ೬೫೭ ಕೋಟಿ ರೂಪಾಯಿ ಅಂದಾಜು ವೆಚ್ಚದ ೮ ಪ್ರಮುಖ ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ. ಇದಲ್ಲದೆ, ಸಭೆಯಲ್ಲಿ ನಿನ್ನೆ ಪ್ರಧಾನಮಂತ್ರಿ ಜೀವನ್ ಯೋಜನೆಗೆ ಅನುಮೋದನೆ ಸೇರಿದಂತೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮೀಸಲಾತಿ ಕುರಿತ ಇತ್ತೀಚಿನ ಸರ್ವೋಚ್ಚ ನ್ಯಾಯಾಲಯದ ತೀರ್ಪಿನ ಕುರಿತು ವಿಸ್ತೃತ ಚರ್ಚೆ ನಡೆಯಿತು.

******

೧೮ನೇ ಲೋಕಸಭೆಯ ಹೊಸದಾಗಿ ಆಯ್ಕೆಯಾದ ಸಂಸದರಿಗಾಗಿ ಸಂಸತ್ ಭವನದ ಸಂಕೀರ್ಣದಲ್ಲಿ ಆಯೋಜಿಸಲಾದ ದೃಷ್ಟಿಕೋನ ಕಾರ್ಯಕ್ರಮವನ್ನು ನಿನ್ನೆ ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸ್ಪೀಕರ್ ಸ್ಥಾನದಲ್ಲಿರುವವರು ಸಿದ್ಧಾಂತ ಅಥವಾ ಪಕ್ಷದ ಆಧಾರದ ಮೇಲೆ ಕಾರ್ಯನಿರ್ವಹಿಸುವುದಿಲ್ಲ, ಆದರೆ ಅವರು ಎಲ್ಲಾ ಸದಸ್ಯರ ಹಕ್ಕುಗಳ ರಕ್ಷಕರಾಗಿದ್ದಾರೆ ಎಂದು ಹೇಳಿದರು. ಇದೇ ವೇಳೆ ಅವರು, ಹೆಚ್ಚು ಪರಿಣಾಮಕಾರಿ ವ್ಯವಸ್ಥೆಗಳನ್ನು ಖಚಿತಪಡಿಸಿಕೊಳ್ಳಲು ಸದನದ ಸೌಲಭ್ಯಗಳು ಮತ್ತು ಕಾರ್ಯಚಟುವಟಿಕೆಗಳ ಬಗ್ಗೆ ತಮ್ಮ ಸಲಹೆಗಳನ್ನು ಹಂಚಿಕೊಳ್ಳಲು ನೂತನ ಸದಸ್ಯರನ್ನು ಒತ್ತಾಯಿಸಿದರು.

೧೮ ನೇ ಲೋಕಸಭೆಯಲ್ಲಿ ಮೊದಲ ಬಾರಿಗೆ ಒಟ್ಟು ೨೮೦ ಸದಸ್ಯರು ಆಯ್ಕೆಯಾಗಿದ್ದಾರೆ ಎಂದು ಸಂತಸ ವ್ಯಕ್ತಪಡಿಸಿದ ಓಂ ಬಿರ್ಲಾ, ಇದು ಹಿಂದಿನ ಲೋಕಸಭೆಗಿಂತ ಹೆಚ್ಚಾಗಿದೆ. ನೂತನ ಸದಸ್ಯರ ಆಲೋಚನೆಗಳು ಮತ್ತು ಮರು ಆಯ್ಕೆಯಾದ ಸದಸ್ಯರ ಅಪಾರ ಅನುಭವಗಳು ಲೋಕಸಭೆಯ ಕಾರ್ಯಚಟುವಟಿಕೆಗಳಿಗೆ ಹೆಚ್ಚಿನ ಗುಣಮಟ್ಟವನ್ನು ತರುತ್ತವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

******

ಮಾಲ್ಡೀವ್ಸ್‌ನೊಂದಿಗಿನ ಭಾರತದ ಪಾಲುದಾರಿಕೆಯು ಪರಸ್ಪರ ಕಲ್ಯಾಣ ಮತ್ತು ಹಿತಾಸಕ್ತಿಗಳಿಗಾಗಿ ಒಟ್ಟಾಗಿ ಕೆಲಸ ಮಾಡುವ ಬದ್ಧತೆಯ ಮೇಲೆ ಆಧರಿಸಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ. ಮೂರು ದಿನಗಳ ಅಧಿಕೃತ ಮಾಲ್ಡೀವ್ಸ್ ಪ್ರವಾಸದಲ್ಲಿರುವ ಅವರು, ನಿನ್ನೆ ಮಾ ತಲುಪಿದ ನಂತರ ಮಾಲ್ಡೀವ್ಸ್‌ನ ಸಹವರ್ತಿ ಮೂಸಾ ಜಮೀರ್ ಅವರೊಂದಿಗೆ ಜಂಟಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದರು. ಮಾಲ್ಡೀವ್ಸ್‌ನ ಸಹವರ್ತಿಯೊಂದಿಗೆ ಫಲಪ್ರದ ಮಾತುಕತೆ ನಡೆಸಲಾಗಿದೆ. ಅಭಿವೃದ್ಧಿ ಪಾಲುದಾರಿಕೆ, ಸಾಮರ್ಥ್ಯ ವರ್ಧನೆ, ದ್ವಿಪಕ್ಷೀಯ ಮತ್ತು ಪ್ರಾದೇಶಿಕ ಭದ್ರತೆ, ವ್ಯಾಪಾರ ಮತ್ತು ಡಿಜಿಟಲ್ ಸಹಕಾರದಲ್ಲಿ ಸೇರಿದಂತೆ ಹಲವು ವಿಷಯಗಳ ಕುರಿತು ಪ್ರಮುಖ ಚರ್ಚೆ ನಡೆದಿದೆ ಎಂದು ಡಾ. ಜೈಶಂಕರ್ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಉಭಯ ನಾಯಕರು ಜಂಟಿಯಾಗಿ ಬೀದಿ ದೀಪ, ಮಾನಸಿಕ ಆರೋಗ್ಯ, ಮಕ್ಕಳ ವಾಕ್ ಚಿಕಿತ್ಸೆ ಮತ್ತು ವಿಶೇಷ ಶಿಕ್ಷಣ ಕ್ಷೇತ್ರಗಳಲ್ಲಿ ಆರು ಸಮುದಾಯ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿದರು. ಇದೇ ವೇಳೆ ಮಾಲ್ಡೀವ್ಸ್‌ನಲ್ಲಿ ಡಿಜಿಟಲ್ ಪಾವತಿ ವ್ಯವಸ್ಥೆಯನ್ನು ಪರಿಚಯಿಸುವ ಕುರಿತು ಭಾರತದ ರಾಷ್ಟ್ರೀಯ ಪಾವತಿ ನಿಗಮ ಮತ್ತು ಮಾಲ್ಡೀವ್ಸ್‌ನ ಆರ್ಥಿಕ ಅಭಿವೃದ್ಧಿ ಮತ್ತು ವ್ಯಾಪಾರ ಸಚಿವಾಲಯದ ನಡುವೆ ಸಹ ತಿಳವಳಿಕೆ ಒಪ್ಪಂದಕ್ಕೆ ಸಹಿ ಹಾಕಲಾಯಿತು.

******

ಕಾಡಿನ ರಾಜ ಸಿಂಹನ ಸಂರಕ್ಷಣೆ ಕುರಿತು ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಇಂದು ವಿಶ್ವ ಸಿಂಹ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ಸಿಂಹಗಳ ಸಂಖ್ಯೆ ಕ್ಷೀಣಿಸುತ್ತಿರುವ ಬಗ್ಗೆ ಮತ್ತು ಅವುಗಳನ್ನು ರಕ್ಷಿಸುವ ತುರ್ತು ಅಗತ್ಯದ ಕುರಿತಂತೆ ಈ ದಿನ ಅರಿವು ಮೂಡಿಸಲಾಗುತ್ತದೆ.

ಭಾರತದಲ್ಲಿ, ಸಿಂಹಗಳ ಸಂರಕ್ಷಣೆಯು ಮಹತ್ವದ ಸಾಂಸ್ಕೃತಿಕ ಮತ್ತು ಪರಿಸರ ಪ್ರಾಮುಖ್ಯತೆಯನ್ನು ಹೊಂದಿದೆ. ಭಾರತವು ಗಿರ್ ಅರಣ್ಯದಲ್ಲಿ ಮಾತ್ರ ಕಂಡುಬರುವ ಏಷ್ಯಾಟಿಕ್ ಸಿಂಹದ ನೆಲೆಯಾಗಿದೆ. ಈ ಪ್ರದೇಶದಲ್ಲಿ ಕೈಗೊಂಡ ಸಂರಕ್ಷಣಾ ಕ್ರಮಗಳಿಂದಾಗಿ ೨೦೧೫ರಲ್ಲಿ ಸುಮಾರು ೫೨೩ ಇದ್ದ ಸಿಂಹಗಳ ಸಂಖ್ಯೆ ೨೦೨೦ರಲ್ಲಿ ೬೭೪ಕ್ಕೆ ಏರಿದೆ ಎಂದು ಪರಿಸರ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ.

******

ಮುಂದಿನ ಏಳು ದಿನಗಳಲ್ಲಿ ಹಿಮಾಚಲ ಪ್ರದೇಶ, ಉತ್ತರಾಖಂಡ ಮತ್ತು ಪೂರ್ವ ರಾಜಸ್ಥಾನದಲ್ಲಿ ಹಗುರದಿಂದ ಸಾಧಾರಣ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮುಂದಿನ ಏಳು ದಿನಗಳಲ್ಲಿ ಜಮ್ಮು-ಕಾಶ್ಮೀರ, ಉತ್ತರ ಪ್ರದೇಶ, ಪಂಜಾಬ್, ಹರಿಯಾಣ-ಚಂಡೀಗಢ-ದೆಹಲಿ ಮತ್ತು ಪಶ್ಚಿಮ ರಾಜಸ್ಥಾನದಲ್ಲಿ ವ್ಯಾಪಕ ಮಳೆಯಾಗುವ ಸಾಧ್ಯತೆಯಿದೆ. ಹಿಮಾಚಲ ಪ್ರದೇಶ ಮತ್ತು ಉತ್ತರಾಖಂಡದಲ್ಲಿ ಇಂದು ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

******

ಭಾರತದ ಯುವ ಕುಸ್ತಿಪಟು ಅಮನ್ ಸೆಹ್ರಾವಟ್ ಪ್ಯಾರಿಸ್ ಒಲಿಂಪಿಕ್ಸ್ ಕ್ರೀಡಾಕೂಟದ ಪುರುಷರ ಫ್ರೀಸ್ಟೈಲ್ ೫೭ ಕೆ.ಜಿ. ವಿಭಾಗದ ಕುಸ್ತಿಯಲ್ಲಿ ಕಂಚಿನ ಪದಕ ಗೆದ್ದು ಇತಿಹಾಸ ನಿರ್ಮಿಸಿದರು. ಕಂಚಿನ ಪದಕಕ್ಕಾಗಿ ನಿನ್ನೆ ರಾತ್ರಿ ನಡೆದ ರೋಚಕ ಪಂದ್ಯದಲ್ಲಿ ಹರಿಯಾಣದ ೨೧ ವರ್ಷದ ಅಮನ್ ೧೩-೫ ಅಂಕಗಳ ಅಂತರದಲ್ಲಿ ಪೋರ್ಟೊ ರಿಕೊದ ಡೇರಿಯನ್ ಕ್ರೂಜ್ ವಿರುದ್ಧ ಗೆದ್ದು ಭಾರತದ ಕೀರ್ತಿ ಪತಾಕೆ ಹಾರಿಸಿದರು. ಒಟ್ಟು ೬ ನಿಮಿಷಗಳ ಪೈಪೋಟಿಯ ಮೊದಲ ಸುತ್ತಿನಲ್ಲಿ ೬-೩ ಅಂಕಗಳಿಂದ ಮೇಲುಗೈ ಸಾಧಿಸಿದ ಭಾರತೀಯ ಕುಸ್ತಿಪಟು, ದ್ವಿತೀಯ ಸುತ್ತಿನಲ್ಲಿ ೧೩-೫ಕ್ಕೆ ಹೆಚ್ಚಿಸುವ ಮೂಲಕ ಕುಸ್ತಿಯಲ್ಲಿನ ಪ್ರಶಸ್ತಿ ಕೊರಗನ್ನು ನೀಗಿಸಿದರು. ಕಂಚಿನ ಪದಕ ಜಯಿಸಿದ ಅಮನ್ ಸೆಹ್ರಾವಟ್ ಅವರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಮತ್ತು ಪ್ರಧಾನಿ ನರೇಂದ್ರ ಮೋದಿ ಅಭಿನಂದನೆ ಸಲ್ಲಿಸಿದ್ದಾರೆ. ಅತ್ಯಂತ ಕಿರಿಯ ಪುರುಷ ಕುಸ್ತಿ ಪಟು ಅಮನ್ ಅವರು, ತಮ್ಮ ಮೊದಲ ಒಲಿಂಪಿಕ್ಸ್‌ನಲ್ಲೇ ಪದಕ ಗೆದ್ದಿದ್ದಾರೆ.

ಅವರು ಇದೇ ರೀತಿ ಭಾರತಕ್ಕೆ ಇನ್ನು ಹೆಚ್ಚಿನ ಪದಕ ಪ್ರಶಸ್ತಿಗಳನ್ನು ತಂದುಕೊಡುವ ಭರವಸೆ ಇದೆ ಎಂದು ರಾಷ್ಟ್ರಪತಿ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಅಮನ್ ಅವರ ಅಚಲ ಬದ್ಧತೆ ಮತ್ತು ಪರಿಶ್ರಮದಿಂದಾಗಿ ಜಾಗತಿಕ ಮಟ್ಟದಲ್ಲಿ ದೇಶಕ್ಕೆ ಹೆಮ್ಮೆ ಪಡುವಂತಾಗಿದೆ ಎಂದಿದ್ದಾರೆ. ಪ್ರಧಾನಿ ನರೇಂದ್ರ ಮೋದಿ, ಅಮನ್ ಅವರ ಸಾಧನೆಯನ್ನು ಇಡೀ ದೇಶ ಸಂಭ್ರಮಿಸುತ್ತಿದ ಎಂದು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಇದರೊಂದಿಗೆ ಹಾಲಿ ಕ್ರೀಡಾಕೂಟದ ಕುಸ್ತಿ ವಿಭಾಗದಲ್ಲಿ ಭಾರತಕ್ಕೆ ಒಲಿದ ಮೊದಲ ಹಾಗೂ ಒಟ್ಟಾರೆ ೬ನೇ ಪದಕ ಇದಾಗಿದೆ. ಇದಕ್ಕೂ ಮುನ್ನ ಶೂಟಿಂಗ್‌ನಲ್ಲಿ ೩, ಹಾಕಿಯಲ್ಲಿ ಒಂದು ಹಾಗೂ ಜಾವೆಲಿನ್‌ನಲ್ಲಿ ಒಂದು ಪದಕಗಳಿಸಿ ಜಯಿಸಿತ್ತು. ಇದರೊಂದಿಗೆ ಭಾರತ ತಂಡ ಪದಕ ಪಟ್ಟಿಯಲ್ಲಿ ೬೬ನೇ ಸ್ಥಾನದಲ್ಲಿದೆ.

******